# ವಾರ್ಡ್ ಹಂತದ ಸಮಿತಿ ಸಭೆ

## ವಾರ್ಡ್ ಸಂಖ್ಯೆ: 137

**21-11-2020** ರಂದು ಶನಿವಾರ ಬೆಳಿಗ್ಗೆ **10.00** ಘಂಟೆಗೆ ವಾರ್ಡ್ ಸಂಖ್ಯೆ: **137** ರಾಯಪುರಂ ವಾರ್ಡ್ ಹಂತದ ಸಮಿತಿ ಸಭೆಯನ್ನು ಮೊಹಮದ್ ಜಾವೀದ್. ಸಹಾಯಕ ಕಾರ್ಯಪಾಲಕ ಅಭಿಯಂತರರು(ಘ.ತ್ಯಾ.ನಿ-ಬೊಮ್ಮನಹಳ್ಳಿ) ಬಿ.ಬಿ.ಎಂ.ಪಿ ಹಾಗೂ ಅಧ್ಯಕ್ಷರು ಮತ್ತು ವಾರ್ಡ್‌ನ ನೋಡೆಲ್ ಅಧಿಕಾರಿ ವಾರ್ಡ್ ಸಂಖ್ಯೆ **137** ರವರ ಅಧ್ಯಕ್ಷತೆಯಲ್ಲಿ ಸಭೆಯನ್ನು ನಡೆಸಲಾಯಿತು.

ಬೃಹತ್ ಬೆಂಗಳೂರು ಮಹಾನಗರ ಪಾಲಿಯಲ್ಲಿ ಚುನಾಯಿತ ಪ್ರತಿನಿಧಿ ಅಧಿಕಾರ ಅವಧಿಯು ದಿನಾಂಕ: **10-09-2020**ಕ್ಕೆ ಮುಕ್ತಾಯವಾಗಿದ್ದು, ಬಿ.ಬಿ.ಎಂ.ಪಿ ಪ್ರತಿ ವಾರ್ಡ್‌ಗೆ ನೋಡೆಲ್ ಅಧಿಕಾರಿ ನೇಮಕಾತಿ ಮತ್ತು ವಾರ್ಡ್ ಹಂತದ ಸಮಿತಿ ರಚಿಸಿದ್ದು. ವಾರ್ಡ್‌ಗೆ ಸಂಬಂಧಿಸಿದಂತೆ ಸಾರ್ವಜನಿಕರ ಹಿತರಕ್ಷಣೆ ಗಾಗಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ಚರ್ಚಿಸಲು ಸಭೆಗೆ ಅಹ್ವಾನಿಸಿದ ಮಾನ್ಯ ಅಧ್ಯಕ್ಷರಿಗೆ ಮತ್ತು ಸಮಿತಿಯ ಸದಸ್ಯರುಗಳಿಗೆ ಸಮಿತಿಯ ಕಾರ್ಯದರ್ಶಿ ಸಭೆಗೆ ಸ್ವಾಗತ ಕೋರುತ್ತಾ ಸಮಿತಿಯ ಅಧ್ಯಕ್ಷರಾದ ಮೊಹಮದ್ ಜಾವೀದ್ ರವರ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು.

### ಸಭೆಯಲ್ಲಿ ಚರ್ಚಿಸಲಾದ ವಿಷಯಗಳು

ವಾರ್ಡ್ ಕಮೀಟಿ ಸದಸ್ಯರು ವಾರ್ಡ್‌ನಲ್ಲಿ ಪೌರ ಕಾರ್ಮಿಕರು ಮತ್ತು ಮನೆ ಮನೆಯಿಂದ ಕಸ ವಿಲೇವರಿಯಾಗದೆ ರಸ್ತೆ ಬದಿಗಳಲ್ಲಿ ಕಸ ಬಿಸಡುತ್ತಿರುವುದರಿಂದ ವಾರ್ಡ್ ವ್ಯಾಪ್ತಿಯಲ್ಲಿ ಈ ಕೆಳಕಂಡ ಪ್ರದೇಶಗಳಲ್ಲಿ ಬ್ಲಾಕ್ ಸ್ಪಾಟ್‌ಗಳು ನಿರ್ಮಾಣವಾಗುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

1. ಪಿ. ಕೆ ಕಾಲೋನಿ, ವೆಂಕಟಸ್ವಾಮಿ ಗಾರ್ಡ್‌ನ್ - ವಿಷ್ಣುವರ್ಧನ್ ಪುತ್ಥಳಿಯ ಹತ್ತಿರ
2. ಕೆ.ಕೆ. ಕಾನ್ವೆಂಟ್ ಸ್ಕೂಲ್ - ಅಂಬೇಡ್ಕರ್ ಮುಖ್ಯರಸ್ತೆಯ
3. ರಂಗನಾಥ ಕಾಲೋನಿ ಬಸ್ ನಿಲ್ದಾಣ

4. ಎಸ್. ಎಸ್ ಸ್ಪೋರ್ಟ್ಸ್ ರಾಯಪುರಂ ಮುಖ್ಯರಸ್ತೆ,

5. ಸಂಗಂ ವೃತ್ತ ಬಿ.ಬಿ.ಎಂ.ಪಿ ಶಾಲೆಯ ಕಾಂಪೌಂಡ್.

ಸದರಿ ವಿಷಯದ ಬಗ್ಗೆ ಸಹಾಯಕ ಕಾರ್ಯಪಾಲಕ ಅಭಿಯಂತರರು(ಎಸ್.ಡಬ್ಲ್ಯೂ.ಎಂ.) ಮತ್ತು ಸಂಬಂಧಿಸಿದ ಅಧಿಕಾರಿಗಳಿಗೆ ವಿವರಣೆಯನ್ನು ನೀಡಲು ಸಭಾಧ್ಯಕ್ಷರು ಸಭೆಯಲ್ಲಿ ತಿಳಿಸಿದರು

ಸದರಿ ವಿಷಯದ ಬಗ್ಗೆ ಸದಸ್ಯರಾದ ಕಿರಿಯ ಆರೋಗ್ಯ ಪರಿವೀಕ್ಷಕರು ಸಭೆಯಲ್ಲಿ ಈಗಾಗಲೇ ಕಮಿಟಿ ಸಭೆಯಲ್ಲಿ ವಿಷಯದ ಬಗ್ಗೆ ಗಮನಕ್ಕೆ ತರಲಾಗಿದ್ದು ಪೌರ ಕಾರ್ಮಿಕರ ಹಾಜರಾತಿ ಪುಸ್ತಕ ಮತ್ತು ಆಟೋ ಹಾಜರಾತಿಯ ಬಗ್ಗೆ ಸಭೆಯ ಗಮನಕ್ಕೆ ತರುತ್ತಾ ಸದರಿ ವಾರ್ಡ್ ಸಂಖ್ಯೆ 137 ರಾಯಪುರಂ ವಾರ್ಡ್ ವ್ಯಾಪ್ತಿಯಲ್ಲಿ ಹೆಚ್ಚಿನ ಪ್ರಮಾಣದ ಪೌರ ಕಾರ್ಮಿಕರು ವಾಸಿಸುತ್ತಿದ್ದು (ಅಂದಾಜು 2500) ಸದರಿ ಕಾರ್ಮಿಕರು ದಿನ ನಿತ್ಯ ಬೆಳಗ್ಗೆ 5.00 ಗಂಟೆಗೆ ತಮ್ಮ ಕರ್ತವ್ಯ ನಿಮಿತ ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸಲು ಹೊರಗಡೆ ಹೋಗಿ ಸಂಜೆ ಮನೆಗಳಿಗೆ ಹಿಂದಿರುಗುವುದರಿಂದ ಸದರಿ ಪ್ರದೇಶಗಳಲ್ಲಿ ಹೆಚ್ಚಿನ ಹೆಚ್ಚಿನ ಕಸ ಸಂಗ್ರಹಣೆಯಾಗಿ ಬ್ಲಾಕ್ ಸ್ಪಾಟ್ಸ್ ನಿರ್ಮಾಣವಾಗುತ್ತಿದೆ. ಅದ್ದರಿಂದ ಸದರಿ ಬ್ಲಾಕ್ ಸ್ಪಾಟ್ಸ್‌ಗಳು ನಿರ್ಮಾಣವಾಗುವುದನ್ನು ತಡೆಗಟ್ಟಲು ರಾತ್ರಿ ಪಾಳಿಯಲ್ಲಿ 5 ಆಟೋಗಳನ್ನು ಗುತ್ತಿಗೆ ಆಧಾರದ ಮೇಲೆ ನಿಯೋಜಿಸಿಕೊಂಡು ಕಾರ್ಯನಿರ್ವಹಿಸಿದ್ದಲ್ಲಿ ಯಾವುದೇ ಬ್ಲಾಕ್ ಸ್ಪಾಟ್ಸ್ ನಿರ್ಮಾಣವಾಗುವುದಿಲ್ಲವೆಂದು ಸಭೆಯಲ್ಲಿ ವಿವರಣೆ ನೀಡಿದರು.

ಕಮಿಟಿಯಲ್ಲಿ ಹಾಜರಾಗಿದ್ದ ಎಲ್ಲಾ ಸದಸ್ಯರು ಸದರಿ ವಿವರಣೆಯನ್ನು ಒಪ್ಪಿಕೊಂಡರು ಹಾಗೂ ಅಧ್ಯಕ್ಷರು ಸಭೆಯ ತಿರ್ಮಾಣದಂತೆ ರಾತ್ರಿ ಪಾಳಿಯಲ್ಲಿ ಹೆಚ್ಚುವರಿಯಾಗಿ 5 ಆಟೋಗಳನ್ನು ಗುತ್ತಿಗೆ ಆಧಾರದ ಮೇಲೆ ನಿಯೋಜಿಸಿಕೊಂಡು ಕಾರ್ಯನಿರ್ವಹಿಸಲು ಸಂಬಂಧಿಸಿದ ಪ್ರಾಧಿಕಾರದ ಅನುಮೋದನೆ ಪಡೆಯಲು ನಿರ್ಣಯವನ್ನು ಮಂಡಿಸಲಾಯಿತು.

ವಾರ್ಡ್ ಕಮಿಟಿ ಸದಸ್ಯರು ವಾರ್ಡ್ ವ್ಯಾಪ್ತಿಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಬೀದಿ ದೀಪಗಳ ಸಮಸ್ಯೆಯ ಬಗ್ಗೆ ದೂರುಗಳು ಬರುತ್ತೀದ್ದು, ಈ ಬಗಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ಪ್ರಸ್ತಾಪಿಸಿದರು.

ಮಾನ್ಯ ಅಧ್ಯಕ್ಷರು ಸದರಿ ವಿಷಯದ ಬಗ್ಗೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಕ್ತ ಆದೇಶ ನೀಡಿ ತುರ್ತಾಗಿ ಬೀದಿ ದೀಪಗಳ ನಿರ್ವಹಣೆ ಮಾಡುವುದಾಗಿ ಸಭೆಯಲ್ಲಿ ತಿಳಿಸಿದರು.

ವಾರ್ಡ್ ಕಮಿಟಿ ಸದಸ್ಯರು ಬಿ.ಬಿ.ಎಂ.ಪಿ ಕಾಲೇಜು ಆರಂಭವಾಗುತ್ತಿರುವುದರಿಂದ ಸದರಿ ಬಿ.ಬಿ.ಎಂ.ಪಿ ಕಾಲೇಜು ಮತ್ತು ಆವರಣವನ್ನು ಪೂರ್ಣ ಪ್ರಮಾಣದಲ್ಲಿ ಸ್ವಚ್ಛಗೊಳಿಸಿ ಹಾಗೂ ಕೋವಿಡ್-19 ನಿಯಮವನ್ನು ಪಾಲಿಸಿಕೊಂಡು ಕಾರ್ಯನಿರ್ವಹಿಸಲು ಶಾಲಾ ಮುಖ್ಯಸ್ಥರಿಗೆ ಸೂಚಿಸಲು ಕೋರಿದರು.

ಮಾನ್ಯ ಅಧ್ಯಕ್ಷರು ಬಿ.ಬಿ.ಎಂ.ಪಿ ಪದವಿ ಪೂರ್ವ ಕಾಲೇಜಿಗೆ ಬೇಟಿ ನೀಡಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಸಭೆಯಲ್ಲಿ ತಿಳಿಸಿದರು.

ವಾರ್ಡ್ ಕಮಿಟಿ ಸದಸ್ಯರು ವಾರ್ಡ್ ವ್ಯಾಪ್ತಿಯುಲ್ಲಿ ರಸ್ತೆ ಬದಿ ನೀರು ನಿಂತು ಸೊಳ್ಳೆಗಳ ಉತ್ಪಾದನೆಯು ಹೆಚ್ಚಾಗಿರುವುದರಿಂದ ಹಿರಿಯ ಆರೋಗ್ಯ ಪರಿವೀಕ್ಷಕರು ಗ್ಯಾಂಗ್‌ಮೇನ್ ಉಪಯೋಗಿಸಿಕೊಂಡು ಸೊಳ್ಳೆ ಔಷಧಿ ಸಿಂಪಡಿಸುವ ಗುತ್ತಿಗೆದಾರರನ್ನು ದಿನ ಔಷಧಿ ಸಿಂಪಡಿಸುವಂತೆ ಸಭಾಧ್ಯಕ್ಷರಲ್ಲಿ ಮನವಿಯನ್ನು ಮಾಡಿದರು.

ಅಧ್ಯಕ್ಷರು : ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ವಾರ್ಡ್ ವ್ಯಾಪ್ತಿಯಲ್ಲಿ ಸೊಳ್ಳೆ ಔಷಧಿಯನ್ನು ಸಿಂಪಡಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ತಿಳಿಸಿದರು

ಅಧ್ಯಕ್ಷರು ಕೋವಿಡ್-19 ಸಂಬಂಧ ಸೋಂಕು ಹರಡುವುದನ್ನು ತಡೆಗಟ್ಟ ಮುಖಗವಸವನ್ನು ಕಡ್ಡಾಯವಾಗಿ ಬಳಸಲು ಕ್ರಮ ವಹಿಸುವಂತೆ ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು

ಅಧ್ಯಕ್ಷರು: ಕೋವಿಡ್-19 ಟೆಸ್ಟ್ ಮಾಡಿಸಲು ಹೆಚ್ಚಿನ ಪ್ರಮಾಣದಲ್ಲಿ ಸಾರ್ವಜನಿಕರು ಬರದೇ ಇರುವುದರಿಂದ ಸಾರ್ವಜನಿಕರಿಗೆ ಹರಿವು ಮೂಡಿಸಲು ಕಾರ್ಯಕ್ರಮವನ್ನು ಹಮ್ಮಿಕೊಳ್ಳುವಂತೆ ಹಾಗೂ ಕೋವಿಡ್-19 ಸೊಂಕು ತಗುಲಿರುವ ಅಕ್ಕ ಪಕ್ಕದ ಮನೆಯವರಿಗೆ ಟೆಸ್ಟ್ ಮಾಡಿಸುವಂತೆ ಅರಿವು ಮೂಡಿಸಲು ಸಭೆಯಲ್ಲಿ ಹಾಜರಿದ್ದ ಆರೋಗ್ಯ ಇಲಾಖೆ ಸಿಬ್ಬಂದಿಗಳಿಗೆ ಸೂಚಿಸಿದರು.

ಅಧ್ಯಕ್ಷರು : ವಾರ್ಡಿನಲ್ಲಿ ಕಾರ್ಯನಿರ್ವಹಿಸುತ್ತೀರುವ ಪೌರ ಕಾರ್ಮಿಕರಿಗೆ 15 ದಿನಗಳಿಗೊಮ್ಮೆ ಕೋವಿಡ್-19 ಟೆಸ್ಟ್ ಮಾಡಲು ಸಂಬಂಧ ಪಟ್ಟ ಅಧಿಕಾರಿಗಳಿಗೆ ಸೂಚಿಸಿದರು

ಆರೋಗ್ಯ ವೈದ್ಯಾಧಿಕಾರಿಗಳು: ಸರ್ಕಾರದ ಆದೇಶದಂತೆ ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ ಮುಖಗವಸುಗಳನ್ನು ಬಳಸದೇ ಇರುವವರಿಗೆ ಸೂಕ್ತ ದಂಡವನ್ನು ವಿಧಿಸುವುದನ್ನು ಪೊಲೀಸ್ ಇಲಾಖೆಗೆ ವಹಿಸಿರುವುದರಿಂದ ಪೊಲೀಸ್ ಇಲಾಖೆ ಸೂಕ್ತ ಕ್ರಮ ಕೈಗೊಳ್ಳುತ್ತೀರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು: ಬಿ.ಡಬ್ಲೂ. ಎಸ್. ಎಸ್. ಬಿ ಅಧಿಕಾರಿಗಳಿಗೆ ವಾರ್ಡ್ ವ್ಯಾಪ್ತಿಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಓಳಚರಂಡಿಗೆ ಸಂಬಂಧಿಸಿದ ದೂರುಗಳು ಬರುತ್ತೀದ್ದು ಸದರಿ ದೂರುಗಳ ವಿವರವನ್ನು ನೀಡಿ ತುರ್ತಾಗಿ ಸೂಕ್ತ ಕ್ರಮ ಕೈಗೊಳ್ಳಲು ತಿಳಿಸಿದರು

ಅಧ್ಯಕ್ಷರು: ಸಾರ್ವಜನಿಕರಿಂದ ಬಂದ ದೂರಿನ ಪಟ್ಟಿಯನ್ನು ಪರಿಶೀಲಿಸಿ ಬೆಸ್ಕಂ ಅಧಿಕಾರಿಗಳಿಗೆ ದೂರುಗಳ ವಿವರವನ್ನು ನೀಡಿ ತುರ್ತಾಗಿ ಸೂಕ್ತ ಕ್ರಮ ಕೈಗೊಳ್ಳಲು ತಿಳಿಸಿದರು

ಬೇಸ್ಕಂ ಆಧಿಕಾರಿಯವರು ಸದರಿ ವಿಷಯದ ಬಗ್ಗೆ ಪರಿಶೀಲಿಸಿ ಕ್ರಮ ಕೈಗೊಂಡು ಸಾರ್ವಜನಿಕರಿಗೆ ತೊಂದರೆಯಾಗದಂತೆ ಕಾರ್ಯವನ್ನು ನಿರ್ವಹಿಸುವುದಾಗಿ ತಿಳಿಸಿದರು.

ಅಧ್ಯಕ್ಷರು: ವಾರ್ಡ್ ನಂ. 137ರ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬೂತ್ ಮಟ್ಟದ ಅಧಿಕಾರಿಗಳಿಂದ ಪ್ರತಿ ಮನೆ ಮನೆಗೆ ಭೇಟಿ ನೀಡಿ ಕೋವಿಡ್-19ರ ಬಗ್ಗೆ ತಿಳಿವಳಿಕೆ ನೀಡಲು ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು : ಕಂದಾಯ ಪರಿವೀಕ್ಷಕರಿಗೆ ಬಿ.ಬಿ.ಎಂ.ಪಿ ಆದೇಶದಂತೆ ವಾರ್ಡ್ ಮಟ್ಟದ ಕಂದಾಯ ಇಲಾಖೆಯ ಕಛೇರಿಯಲ್ಲಿ ಮತದಾರರ ಗುರ್ತಿನ ಚೀಟಿಯ ಕರಡು ಪ್ರತಿಯನ್ನು ಲಗತ್ತೀಸಿ ಸಾರ್ವಜನಿಕರಿಗೆ ಪ್ರದರ್ಶಿಸುವಂತೆ ಸಭೆಯಲ್ಲಿ ತಿಳಿಸಿದರು

ಕಂದಾಯ ಪರಿವೀಕ್ಷಕರು ಮತದಾರರ ಗುರ್ತಿನ ಚೀಟಿಯ ಕರಡು ಪ್ರತಿ ತಯಾರಾಗುತ್ತಿದ್ದು ನಂತರ ಬಿ.ಬಿ.ಎಂ.ಪಿ ನಿಯಮಾನುಸಾರ ಕಾರ್ಯನಿರ್ವಹಿಸುವುದಾಗಿ ಸಭೆಯಲ್ಲಿ ತಿಳಿಸಿದರು.

---5

ಮಾನ್ಯ ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ಬರುವ ಬಿ.ಬಿ.ಎಂ.ಪಿ ಕಟ್ಟಡ ಮತ್ತು ಕಛೇರಿಗಳನ್ನು ಉತ್ತಮ ರೀತಿಯಲ್ಲಿ ನಿರ್ವಹಣೆ ಮಾಡಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ಸೂಚಿಸಿದರು.

ಸದರಿ ವಿಷಯದ ಬಗ್ಗೆ ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ರವರು. ಗುತ್ತಿಗೆದಾರರನ್ನು ಮತ್ತು ಬಿ.ಬಿ.ಎಂ.ಪಿ ಸಿಬ್ಬಂದಿಯನ್ನು ಉಪಯೋಗಿಇಕೊಂಡು ಉತ್ತಮ ರೀತಿಯಲ್ಲಿ ನಿರ್ವಹಣೆ ಮಾಡುತ್ತೀರುವುದಾಗಿ ಸಭೆಯಲ್ಲಿ ವಿವರಣೆ ನೀಡಿದರು

ಇಂದಿನ ಸಭೆಯಲ್ಲಿ ಚರ್ಚಿಸಿದ ಹಾಗೂ ನಿರ್ಣಯಗಳನ್ನು ಕಾರ್ಯದರ್ಶಿ ಮತ್ತು ಸಂಚಾಲಕರು. ಸಭೆಯ ನಡಾವಳಿಗಳ ಪುಸ್ತಕದಲ್ಲಿ ದಾಖಲಿಸಿದರು. ವಂದನಾರ್ಪಣೆ ಮಾಡುವುದರ ಮೂಲಕ ಇಂದಿನ ಸಭೆಯನ್ನು ಮುಕ್ತಾಯಗೊಳಿಸಿದರು.

## ಹಾಜರಿದ್ದ ವಾರ್ಡ್ ಕಮೀಟಿ ಸದಸ್ಯರು

| ಕ್ರಮ ಸಂಖ್ಯೆ | ವಾರ್ಡ್ ಹಂತದ ಸಮೀತಿ ಹಾಗೂ ಸದಸ್ಯರುಗಳ ಹೆಸರು ಮೊಬೈಲ್ ಸಂಖ್ಯೆ | | ಸಹಿ |
|---|---|---|---|
| 1 | ಮೊಹಮದ್ ಜಾವೀದ್. ಸಹಾಯಕ ಕಾರ್ಯಪಾಲಕ ಅಭಿಯಂತರರು( ಘ.ತ್ಯಾ.ನಿ-ಬೊಮ್ಮನಹಳ್ಳಿ) ಬಿ.ಬಿ.ಎಂ.ಪಿ, ದೂ. ಸಂಖ್ಯೆ: 9845720286 | ಅಧ್ಯಕ್ಷರು ಮತ್ತು ವಾರ್ಡ್‌ನ ನೂಡಲ್ ಅಧಿಕಾರಿ | [signature] |
| 2 | ಶ್ರೀ ಗಿರಿಧರ್ ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ: 137 ಬಿ.ಬಿ.ಎಂ.ಪಿ, ದೂ. ಸಂ 8618436036 | ಸದಸ್ಯ ಕಾರ್ಯದರ್ಶಿ | [signature] |
| 3 | ಗೀತಾ ಹೆಚ್. ದೂ. 9986537126 ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ -137 | ಸದಸ್ಯರು | [signature] |
| 4 | ಸಹಾಯಕ ಕಾರ್ಯಪಾಲಕ ಅಭಿಯಂತರರ (ಕಾಮಗಾರಿ) ಜೆ.ಜೆ.ಆರ್ ನಗರ ಉಪ ವಿಭಾಗದ ರವರ ಪ್ರತಿನಿಧಿ ಶ್ರೀ ಬಾಬು (ಕೆಲಸ ಪರಿವೀಕ್ಷಕರು) ವಾರ್ಡ್-137, ದೂ. 9342582372 | ಸದಸ್ಯರು | [signature] |
| 5 | ಆರೋಗ್ಯಾಧಿಕಾರಿಗಳು, ಚಾಮರಜಪೇಟೆ ವಿಭಾಗ ರವರ ಪ್ರತಿನಿಧಿ ಬಸವಲಿಂಗಯ್ಯ ದೂ. 9686418488 | ಸದಸ್ಯರು 2 | [signature] |
| 6 | ಶ್ರೀ ಸಿ. ಆರ್ ರವಿ ಪ್ರಸಾದ್ ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ. ದೂ. 9845802912 | ಸದಸ್ಯರು | [signature] |
| 7 | ಶ್ರೀ ರಿಜ್ವಾನ್, ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ. ದೂ. 9845262860 | ಸದಸ್ಯರು | |
| 8 | ಶ್ರೀ ರಾಜು, ದೂ.. 7676512877 ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ. | ಸದಸ್ಯರು | [signature] |

| | | | |
|---|---|---|---|
| 9 | ಶ್ರೀಮತಿ ಆಶಾ. ದೂ. 9731317223<br>ಕಂದಾಯ ಪರಿವೀಕ್ಷಕರು | ಸದಸ್ಯರು | |
| 10 | ಸಹಾಯಕ ಕಾರ್ಯಪಾಲಕ ಅಭಿಯಂತರರು<br>(ಘ.ತ್ಯಾ.ನಿ) ರವರ ಪ್ರತಿನಿಧಿ | ಸದಸ್ಯರು | |
| 11 | ಸಹಾಯಕ ಕಾರ್ಯಪಾಲಕ ಅಭಿಯಂತರರ<br>(ಬಿಡಬ್ಲ್ಯೂ.ಎಸ್.ಎಸ್.ಬಿ) ರವರ ಪ್ರತಿನಿಧಿ<br>ಶ್ರೀ ಹನುಮಂತ ರಾಜು. ದೂ. 8618556909 | ಸದಸ್ಯರು | |
| 12 | ಸಹಾಯಕ ಕಾರ್ಯ ಪಾಲಕ ಅಭಿಯಂತರರು<br>(ಬೇಸ್ಕಂ) ರವರ ಪ್ರತಿನಿಧಿ.<br>ದೂ. 9449840364 | ಸದಸ್ಯರು | I/C. Assistant Engine<br>O&M-8, GORIPA<br>W-3, SUB DIVIS |

ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ 137
ವಾರ್ಡ್ ಹಂತದ ಸಮಿತಿ

21/11/2020.
ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿ
ವಾರ್ಡ್ ಹಂತದ ಸಮಿತಿ, ವಾರ್ಡ್ ನಂ. 137

ಪ್ರತಿಯನ್ನು

1. ಜಂಟಿ ಆಯುಕ್ತರು ಪಶ್ಚಿಮ ರಚರ ಅವಗಾಹನೆಗೆ ಸಲ್ಲಿಸಿದೆ,
2. ಮುಖ್ಯ ಅಭಿಯಂತರರು ಪಶ್ಚಿಮ ರವರ ಮಾಹಿತಿಗೆ ಸಲ್ಲಿಸಿದೆ,
3. ಕಛೇರಿ ಕಡತಕ್ಕೆ